ಕರ್ನಾಟಕ ಸರ್ಕಾರ

ವಿಭಾಗೀಯ ಕಾರ್ಯದರ್ಶಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಜಂಟಿನಿರ್ದೇಶಕರ ಕಛೇರಿ,
ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಡಿ. ಸುಬ್ಬಯ್ಯ ರಸ್ತೆ, ಮೈಸೂರು-570 024.

ಇ-ಮೇಲ್: jdpi.edu.karmys@nic.in ದೂರವಾಣಿ ಸಂಖ್ಯೆ: 0821-2422208

**********************************************************************

ಸಂಖ್ಯೆ: ಜಿ12/ಸೇ.ಜೇ.ಪಟ್ಟಿ.142614/2019-20 ದಿನಾಂಕ: 18-12-2019

## ಅಧಿಸೂಚನೆ

ವಿಷಯ: ದಿನಾಂಕ 01-01-2019ರಲ್ಲಿದ್ದಂತೆ ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು-ಗ್ರೇಡ್2 ರವರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 152 ಎಲ್‌ಬಿಪಿ 2014 ದಿನಾಂಕ 20-05-2014.
2. ಮಾನ್ಯ ಆಯುಕ್ತರು, ಸಾ.ಶಿ.ಇ, ಬೆಂಗಳೂರು ರವರ ಅಧಿಕೃತ ಜ್ಞಾಪನ ಸಂಖ್ಯೆ: ಸಿ1(2)(5)/ಸ್ಥಾನಪನ್ನ ಬಡ್ತಿ/07/2017-18 ದಿನಾಂಕ 22-11-2019

**********

ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರು ಗ್ರೇಡ್-2 ಇವರ ಜೇಷ್ಠತಾ ಪಟ್ಟಿಯನ್ನು ತಯಾರಿಸುವಾಗ ಸೇವೆಗೆ ಸೇರಿದ ದಿನಾಂಕವನ್ನು ಪರಿಗಣಿಸದೆ ಆಯ್ಕೆ ಪಟ್ಟಿಯಲ್ಲಿರುವ ಮೆರಿಟ್ ಆಧಾರದ ಮೇಲಿನ ಕ್ರಮ ಸಂಖ್ಯೆಯನ್ನು ಪರಿಗಣಿಸುವಂತೆ ತಿಳಿಸಲಾಗಿದೆ. ಉಲ್ಲೇಖ(2)ರ ಮಾನ್ಯ ಆಯುಕ್ತರ ಆದೇಶದಲ್ಲಿ ದಿನಾಂಕ 17-10-2019ರಂದು ನಿರ್ದೇಶಕರು (ಪ್ರೌಢ ಶಿಕ್ಷಣ) ರವರು ಪ್ರಕಟಿಸಿರುವ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ಸಾಕಷ್ಟು ನ್ಯೂನತೆಗಳಿದ್ದು, ಆಕ್ಷೇಪಣೆಗಳು ಬಂದಿರುವ ಹಿನ್ನೆಲೆಯಲ್ಲಿ, ಪ್ರೌಢಶಾಲಾ ಸಹ ಶಿಕ್ಷಕರ ಆಯ್ಕೆ ಪ್ರಾಧಿಕಾರಿಗಳಾದ ವಿಭಾಗೀಯ ಸಹ ನಿರ್ದೇಶಕರು ದಿನಾಂಕ 01-01-2019ರಲ್ಲಿದ್ದಂತೆ ಮೈಸೂರು ವಿಭಾಗ ಮಟ್ಟದಲ್ಲಿ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರು ಗ್ರೇಡ್-2 ಇವರ ಜೇಷ್ಠತಾ ಪಟ್ಟಿಯನ್ನು ತಯಾರಿಸುವಂತೆ ಆದೇಶಿಸಿರುತ್ತಾರೆ.

ದಿನಾಂಕ 01-04-1979 ಕ್ಕಿಂತ ಪೂರ್ವದಲ್ಲಿ ಸೇವೆಗೆ ಸೇರಿರುವ ಸರ್ಕಾರಿ ಘಟಕ, ತಾಲ್ಲೂಕು ಅಭಿವೃದ್ಧಿ ಮಂಡಳಿ ಘಟಕ ಹಾಗೂ ಪುರಸಭೆ ಘಟಕಗಳ ಪ್ರತ್ಯೇಕ ಜೇಷ್ಠತಾ ಪಟ್ಟಿ ಹಾಗೂ ಸಂಯುಕ್ತೀಕರಿಸಿದ ಅಂತಿಮ ಜೇಷ್ಠತಾ ಪಟ್ಟಿಗಳನ್ನು ಈಗಾಗಲೇ ನಿರ್ದೇಶಕರು (ಪ್ರೌಢ ಶಿಕ್ಷಣ) ರವರು ಪ್ರಕಟಿಸಿರುವುದರಿಂದ ಸದರಿ ಮಾಹಿತಿಯನ್ನು ಈ ಪಟ್ಟಿಯಲ್ಲಿ ಸೇರಿಸಲಾಗಿರುವುದಿಲ್ಲ.

ಮೇಲಿನ ಉಲ್ಲೇಖ(1) ಮತ್ತು (2)ರ ಅನ್ವಯ ಮೈಸೂರು ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರು ಗ್ರೇಡ್-2 ಇವರ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಈ ರೀತಿ ಸಿದ್ಧಪಡಿಸುವಾಗ ನೇರ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಆಯಾ ಸಂದರ್ಭಗಳಲ್ಲಿ ಪ್ರಕಟಿಸಲಾದ ಆಯ್ಕೆಪಟ್ಟಿಯಲ್ಲಿನ ಮೆರಿಟ್ ಆಧರಿಸಿ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಬಡ್ತಿ ಹೊಂದಿದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾ ಜಿಲ್ಲೆಗಳ ಪ್ರಾಥಮಿಕ ಶಾಲಾ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಆಧರಿಸಿ ನೀಡಲಾಗಿರುವ ಬಡ್ತಿ ಆದೇಶವನ್ನು ಅನುಸರಿಸಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಮರ್ಥನೀಯ ಪೂರಕ ದಾಖಲೆಗಳೊಂದಿಗೆ ದಿನಾಂಕ 21-12-2019ರೊಳಗೆ ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ರವರ ಮೂಲಕ ಸಲ್ಲಿಸುವುದು. ನಿಗಧಿತ ದಿನಾಂಕದೊಳಗೆ ಬಾರದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. (ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಇಲಾಖಾ ವೆಬ್ ಸೈಟ್‌ನಲ್ಲಿ **www.schooleducation.kar.nic.in** ನಲ್ಲಿ ಪ್ರಕಟಿಸಲಾಗಿದೆ).

(ಹೆಚ್.ಎನ್. ಗೀತಾಂಬ)
ವಿಭಾಗೀಯ ಕಾರ್ಯದರ್ಶಿಗಳು ಹಾಗೂ
ಪದನಿಮಿತ್ತ ಜಂಟಿನಿರ್ದೇಶಕರು,
ಕ.ಪ್ರೌ.ಶಿ.ಪ. ಮಂಡಳಿ, ಸಾ.ಶಿ.ಇಲಾಖೆ,
ಮೈಸೂರು ವಿಭಾಗ, ಮೈಸೂರು.

ಇವರಿಗೆ,

1. ವಿಭಾಗದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ರವರಿಗೆ ಸೂಕ್ತ ಕ್ರಮಕ್ಕಾಗಿ.
2. ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:-

1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001 ರವರಿಗೆ ವಂದನೆಗಳೊಂದಿಗೆ ಅವಗಾಹನೆಗೆ ಸಲ್ಲಿಸಿದೆ.
2) ಮಾನ್ಯ ಜಂಟಿ ನಿರ್ದೇಶಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001 ರವರಿಗೆ ವಂದನೆಗಳೊಂದಿಗೆ ಅವಗಾಹನೆಗೆ ಸಲ್ಲಿಸಿದೆ.
3) ಕಛೇರಿ ಪ್ರತಿ.